**Akashvani : Bangalore**
**National Bulletin In Kannada**
**11.12.2024 / 7.35 am**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**11.12.2024 / 7.35 am**

**<><*<><>*><>**

ಮುಖ್ಯಾಂಶಗಳು

೧. ದೆಹಲಿಯಲ್ಲಿ ಇಂದು ರಾಷ್ಟ್ರೀಯ ಪಂಚಾಯತ್ ಪ್ರಶಸ್ತಿ ಪ್ರದಾನ ಮಾಡಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು

೨. 'ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್' ಗ್ರ್ಯಾಂಡ್ ಫಿನಾಲೆ ತಲುಪಿರುವ ಯುವ ನಾವೀನ್ಯಕಾರರೊಂದಿಗೆ ಇಂದು ಪ್ರಧಾನಿ ನರೇಂದ್ರ ಮೋದಿ ಸಂವಾದ

೩. ಇಂದು ಸಂಜೆ ಮಾಜಿ ಮುಖ್ಯಮಂತ್ರಿ ಎಂ.ಎಸ್.ಕೃಷ್ಣ ಅವರ ಪಾರ್ಥೀವ ಶರೀರದ ಅಂತ್ಯಸಂಸ್ಕಾರ; ಕೇಂದ್ರದ ಪ್ರತಿನಿಧಿಯಾಗಿ ಪ್ರಲ್ಹಾದ್ ಜೋಶಿ ಅಂತಿಮ ನಮನ

೪. ಮಹಿಳಾ ಏಕದಿನ ಕ್ರಿಕೆಟ್; ಪರ್ಥ್‌ನಲ್ಲಿಂದು ಭಾರತ - ಆಸ್ಟ್ರೇಲಿಯಾ ಮುಖಾಮುಖಿ

**<><*<><>*><>**

ಪಂಚಾಯತ್ ರಾಜ್ ಸಚಿವಾಲಯ ಆಯೋಜಿಸಿರುವ ರಾಷ್ಟ್ರೀಯ ಪಂಚಾಯತ್ ಪ್ರಶಸ್ತಿ ಪ್ರದಾನ ಸಮಾರಂಭ ಹೊಸದಿಲ್ಲಿಯ ವಿಜ್ಞಾನ ಭವನದ ಪ್ಲೀನರಿ ಹಾಲ್‌ನಲ್ಲಿ ಇಂದು ನಡೆಯಲಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ವಿವಿಧ ವಿಭಾಗಗಳಲ್ಲಿ ಆಯ್ಕೆಯಾದ ೪೫ ಪ್ರಶಸ್ತಿ ಪುರಸ್ಕೃತರಿಗೆ ರಾಷ್ಟ್ರೀಯ ಪಂಚಾಯತ್ ಪ್ರಶಸ್ತಿಗಳನ್ನು ನೀಡಲಿದ್ದಾರೆ. ಸುಸ್ಥಿರ ಮತ್ತು ಎಲ್ಲರನ್ನು ಒಳಗೊಳ್ಳುವ ಸಮಗ್ರ ಅಭಿವೃದ್ಧಿಯ ಕೊಡುಗೆಗಳನ್ನು ಗುರುತಿಸಿ ನೀಡುವ ಈ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಕೇಂದ್ರ ಪಂಚಾಯತ್ ರಾಜ್, ಮೀನುಗಾರಿಕೆ, ಪಶುಸಂಗೋಪನೆ, ಮತ್ತು ಹೈನುಗಾರಿಕೆ ಸಚಿವ ರಾಜೀವ್ ರಂಜನ್ ಸಿಂಗ್ ಅವರ ಸಮ್ಮುಖದಲ್ಲಿ ನೆರವೇರಲಿದೆ. ವಿಕೇಂದ್ರೀಕೃತ ಆಡಳಿತದಲ್ಲಿ ಶ್ರೇಷ್ಠತೆಗಾಗಿ ಶ್ರಮಿಸುವುದನ್ನು ಮುಂದುವರಿಸಲು ಈ ಪ್ರಶಸ್ತಿ ಪ್ರೇರೇಪಿಸುತ್ತದೆ. ಕೇಂದ್ರ ಮತ್ತು ರಾಜ್ಯಗಳು, ಕೇಂದ್ರಾಡಳಿತ ಪ್ರದೇಶಗಳ ಹಿರಿಯ ಅಧಿಕಾರಿಗಳು ಹಾಗು ದೇಶದಾದ್ಯಂತದ ಪಂಚಾಯತ್ ಪ್ರತಿನಿಧಿಗಳು ಸಹ ಈ ಸಂದರ್ಭದಲ್ಲಿ ಉಪಸ್ಥಿತರಿರುವರು. ಸಚಿವ ರಾಜೀವ್ ರಂಜನ್ ಸಿಂಗ್ ಅವರು ಪ್ರಶಸ್ತಿ ವಿಜೇತ ಪಂಚಾಯತ್‌ಗಳ ನವೀನ ಮತ್ತು ಪರಿಣಾಮಕಾರಿ ಅಭ್ಯಾಸಗಳನ್ನು ದಾಖಲಿಸುವ 'ಪ್ರಶಸ್ತಿ ಪಡೆದ ಪಂಚಾಯತ್‌ಗಳ ಕಾರ್ಯಗಳ ಕುರಿತು ಅತ್ಯುತ್ತಮ ಪದ್ಧತಿಗಳು' ಎಂಬ ಕಿರುಪುಸ್ತಕವನ್ನು ಅನಾವರಣಗೊಳಿಸಲಿದ್ದಾರೆ.

**<><*<><>*><>**

ಏಳನೇ ಆವೃತ್ತಿಯ 'ಸ್ಮಾರ್ಟ್ ಇಂಡಿಯಾ ಹ್ಯಾಕಾಥಾನ್' ಇಂದಿನಿಂದ ದೇಶದ್ಯಾಂತ ೫೧ ಕೇಂದ್ರಗಳಲ್ಲಿ ಪ್ರಾರಂಭವಾಗಲಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಹ್ಯಾಕಥಾನ್ ಗ್ರ್ಯಾಂಡ್ ಫಿನಾಲೆಗೆ ತಲುಪಿರುವ ಯುವ ನಾವೀನ್ಯಕಾರರನ್ನುದ್ದೇಶಿಸಿ ವಿಡಿಯೋ ಕಾನ್ಫರೆನ್ಸ್ ಮೂಲಕ ಸಂವಾದ ನಡೆಸಲಿದ್ದಾರೆ. ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಈ ಕಾರ್ಯಕ್ರಮವನ್ನು ವರ್ಚುವಲ್ ಮೂಲಕ ಉದ್ಘಾಟಿಸಲಿದ್ದಾರೆ. ಕರ್ನಾಟಕದ ೯ ಶಿಕ್ಷಣ ಸಂಸ್ಥೆಗಳಲ್ಲಿ ಹ್ಯಾಕಥಾನ್ ಆಯೋಜಿಸಲಾಗಿದೆ. ಬೆಂಗಳೂರಿನ ಎಂ.ಎಸ್.ರಾಮಯ್ಯ ಯೂನಿವರ್ಸಿಟಿ ಆಫ್ ಅಪ್ಲೈಡ್ ಸೈನ್ಸಸ್, ಡಾನ್ ಬಾಸ್ಕೊ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ ಮತ್ತು ನ್ಯೂ ಹಾರಿಜಾನ್ ಕಾಲೇಜ್ ಆಫ್ ಎಂಜಿನಿಯರಿಂಗ್, ಮೈಸೂರಿನ ವಿದ್ಯಾವರ್ಧಕ ಕಾಲೇಜ್ ಆಫ್ ಎಂಜಿನಿಯರಿಂಗ್ ಮತ್ತು ನ್ಯಾಷನಲ್ ಇನ್ಸ್‌ಟಿಟ್ಯೂಟ್ ಆಫ್ ಎಂಜಿನಿಯರಿಂಗ್, ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಮಂಗಳೂರಿನ ಸಹ್ಯಾದ್ರಿ ಕಾಲೇಜ್ ಆಫ್ ಎಂಜಿನಿಯರಿಂಗ್ ಅಂಡ್ ಮ್ಯಾನೇಜ್‌ಮೆಂಟ್, ಸೂರತ್ಕಲ್‌ನ ನ್ಯಾಷನಲ್ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ ಮತ್ತು ಹುಬ್ಬಳ್ಳಿಯ ಕೆಎಲ್‌ಇ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ ಹ್ಯಾಕಾಥಾನ್ ನಡೆಯಲಿದೆ. ವಿದ್ಯಾರ್ಥಿಗಳಿಗೆ ಅವರ ದಿನನಿತ್ಯದ ಜೀವನದಲ್ಲಿ ಎದುರಾಗುವ ಪ್ರಮುಖ ಸಮಸ್ಯೆಗಳ ಪರಿಹಾರವನ್ನು ಕಂಡು ಹಿಡಿಯಲು ವೇದಿಕೆಯನ್ನು ಒದಗಿಸುವ ಈ ರಾಷ್ಟ್ರೀಯ ಹಬ್ಬವು, ಉತ್ಪಾದಕತೆ, ನಾವೀನ್ಯತೆ ಮತ್ತು ಸಮಸ್ಯೆ ಪರಿಹಾರ ಮನೋಭಾವವನ್ನು ಪ್ರೇರೇಪಿಸುತ್ತದೆ. ಹಿಂದಿನ ಆವೃತ್ತಿಗಳಂತೆ ವಿದ್ಯಾರ್ಥಿ ತಂಡಗಳು, ಸಚಿವಾಲಯಗಳು, ಇಲಾಖೆಗಳು ಮತ್ತು ಕೈಗಾರಿಕೆಗಳಿಂದ ನೀಡಲಾದ ಸಮಸ್ಯೆಗಳ ಮೇಲೆ ಕಾರ್ಯನಿರ್ವಹಿಸುತ್ತದೆ ಮತ್ತು ೧೭ ಧ್ಯೇಯ ವಾಕ್ಯಗಳ ಪೈಕಿ ಒಂದರಲ್ಲಿ ವಿದ್ಯಾರ್ಥಿ ನಾವೀನ್ಯತೆ ವಿಭಾಗಗಳು ತಮ್ಮ ಆಲೋಚನೆಗಳನ್ನು ಪ್ರಸ್ತುತಪಡಿಸಲಿವೆ. ಈ ವರ್ಷ, ೫೪ ಸಚಿವಾಲಯಗಳು, ಇಲಾಖೆಗಳು, ರಾಜ್ಯ ಸರ್ಕಾರಗಳು, ಸಾರ್ವಜನಿಕ ವಲಯದ ಘಟಕಗಳು ಮತ್ತು ಕೈಗಾರಿಕೆಗಳು

೨೫೦ಕ್ಕೂ ಹೆಚ್ಚು ಸಮಸ್ಯೆಗಳ ಪಟ್ಟಿಯನ್ನು ಸಲ್ಲಿಸಿವೆ. ಅಂತಿಮ ಸುತ್ತಿನಲ್ಲಿ ೧ ಸಾವಿರದ ೩೦೦ ಕ್ಕೂ ಹೆಚ್ಚು ವಿದ್ಯಾರ್ಥಿ ತಂಡಗಳು ಭಾಗವಹಿಸಲಿವೆ. ಈ ಸಂದರ್ಭದಲ್ಲಿ ಪ್ರಧಾನಮಂತ್ರಿ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

<><*<><>*><>

ಮೈಸೂರಿನ ಎನ್ ಐಇ ಕಾಲೇಜಿನಲ್ಲಿ ಇಂದಿನಿಂದ ಇದೇ ೧೫ ರ ರವರೆಗೆ ಪ್ರತಿಷ್ಠಿತ ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್ ಆಯೋಜಿಸಲಾಗಿದೆ ಎಂದು ಪ್ರಾಂಶುಪಾಲರಾದ ಡಾ. ರೋಹಿಣಿ ನಾಗಪದ್ಮ ತಿಳಿಸಿದರು. ಕಳೆದ ಬಾರಿ ಸಹಾ ತಮ್ಮ ಕಾಲೇಜಿನಲ್ಲಿ ಹ್ಯಾಕಥಾನ್ ಆಯೋಜಿಸಲಾಗಿತ್ತು.  ಈ ಬಾರಿ ದೇಶದ ವಿವಿಧ ಭಾಗಗಳಿಂದ ಆಗಮಿಸುವ ೧೬೮ ವಿದ್ಯಾರ್ಥಿಗಳ ೨೮ ತಂಡಗಳು ಪಾಲ್ಗೊಳ್ಳಲಿವೆ. ಶಿಕ್ಷಣ ಸಚಿವಾಲಯದ ಇನ್ನೋವೇಷನ್ ಸೆಲ್, ಕಂಡೋ ಟಿಬೆಟ್ಟಿಯನ್ ಬಾರ್ಡರ್ ಪೊಲೀಸ್ ಮೊದಲಾದವು ಉಲ್ಲೇಖಿಸಿದ ಬಾಹ್ಯಾಕಾಶ ತಂತ್ರಜ್ಞಾನ, ಸ್ಮಾರ್ಟ್ ಆಟೋಮೇಷನ್, ಅತ್ಯಾಧುನಿಕ ರೋಬೋಟಿಕ್ಸ್, ಡ್ರೋನ್‌ಗಳ ಸವಾಲುಗಳಿಗೆ ಈ ಸ್ಪರ್ಧೆಯಲ್ಲಿ ಪಾಲ್ಗೊಳ್ಳುವವರು ಮಾದರಿ ಸಿದ್ಧಪಡಿಸಲಿದ್ದು. ಇದೇ ೧೫ ರಂದು  ಇವನ್ನು ಪ್ರದರ್ಶಿಸಲಾಗುವುದು ಎಂದರು.

<><*<><>*><>

ಮಹಾನ್ ತಮಿಳು ಕವಿ ಮತ್ತು ಸ್ವಾತಂತ್ರ್ಯ ಹೋರಾಟಗಾರ ಸುಬ್ರಮಣ್ಯ ಭಾರತಿ ಅವರ ಸಂಪೂರ್ಣ ಕೃತಿಗಳ ಸಂಕಲನವನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಬಿಡುಗಡೆ ಮಾಡಲಿದ್ದಾರೆ.  ನವದೆಹಲಿಯ ೭ ಲೋಕ್ ಕಲ್ಯಾಣ್ ಮಾರ್ಗ್ ನಲ್ಲಿ ಇಂದು ಮಧ್ಯಾಹ್ನ ೧ ಗಂಟೆಗೆ ಕಾರ್ಯಕ್ರಮ ಆಯೋಜನೆಯಾಗಿದೆ. ಸುಬ್ರಮಣ್ಯ ಭಾರತಿ ಅವರ ಬರಹಗಳು ಜನರಲ್ಲಿ ದೇಶಪ್ರೇಮವನ್ನು ತುಂಬುವ ಜೊತೆಗೆ, ಜನಸಾಮಾನ್ಯರು ಅರ್ಥೈಸಿಕೊಳ್ಳಬಹುದಾದ ಸರಳ ಭಾಷೆಯಲ್ಲಿ ಭಾರತೀಯ ಸಂಸ್ಕೃತಿ ಮತ್ತು ದೇಶದ ಆಧ್ಯಾತ್ಮಿಕ ಪರಂಪರೆಯ ಸಾರವನ್ನು ಹೇಳಿವೆ. ಸೀನಿ ವಿಶ್ವನಾಥನ್ ಅವರು ಸಂಕಲನ ಮಾಡಿ ಸಂಪಾದಿಸಿರುವ ಸುಬ್ರಹ್ಮಣ್ಯ ಭಾರತಿ ಅವರ ಸಂಪೂರ್ಣ ಕೃತಿಗಳ  ೨೩ ಸಂಪುಟಗಳನ್ನು ಅಲಯನ್ಸ್ ಪ್ರಕಾಶನ ಪ್ರಕಟಿಸಿದೆ. ಇದು ಸುಬ್ರಮಣ್ಯ ಭಾರತಿಯವರ ಬರಹಗಳ ಆವೃತ್ತಿಗಳು, ವಿವರಣೆಗಳು, ದಾಖಲೆಗಳು, ಹಿನ್ನೆಲೆ ಮಾಹಿತಿ ಮತ್ತು ತಾತ್ವಿಕ ಪ್ರಸ್ತುತಿಗಳ ವಿವರಗಳನ್ನು ಒಳಗೊಂಡಿದೆ.

<><*<><>*><>

ಬೆಂಗಳೂರಿನಲ್ಲಿ ನಿನ್ನೆ ನಿಧನರಾದಮಾಜಿ ಮುಖ್ಯಮಂತ್ರಿ ಎಸ್.ಎಂ ಕೃಷ್ಣ ಅವರ ಪಾರ್ಥೀವ ಶರೀದ ಅಂತ್ಯ ಸಂಸ್ಕಾರ ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನ ಬೆಂಗಳೂರು-ಮೈಸೂರು ಹೆದ್ದಾರಿಯ ಸೋಮನಹಳ್ಳಿ ಕಾಫಿ ಡೇ ಬಳಿ ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಿಸಲಾಗುತ್ತಿದೆ. ಅಂತ್ಯ ಸಂಸ್ಕಾರ ನಡೆಯುವ ಸ್ಥಳಕ್ಕೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ನಿನ್ನೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಇಂದು ಬೆಳಿಗ್ಗೆ ಎಸ್.ಎಂ.ಕೃಷ್ಣ ಅವರ ಪಾರ್ಥೀವ ಶರೀರವನ್ನು ಮದ್ದೂರಿಗೆ ಕೊಂಡೊಯ್ಯಲಾಗುತ್ತಿದೆ. ಎಸ್.ಎಂ.ಕೃಷ್ಣ ನಿಧನದ ಹಿನ್ನೆಲೆಯಲ್ಲಿ ಇಂದು ಸರ್ಕಾರಿ ರಜೆ ಘೋಷಣೆ ಮಾಡಲಾಗಿದೆ. ರಾಜ್ಯ ಸರ್ಕಾರ ಮೂರು ದಿನಗಳ ಶೋಕಾಚರಣೆಯನ್ನು ಘೋಷಿಸಿದೆ. ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ನಿಧನಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರು ನಿನ್ನೆ ರಾತ್ರಿ ಶೋಕ ಸಂದೇಶ ಕಳುಹಿಸಿದ್ದಾರೆ. ಕೇಂದ್ರ ಸರ್ಕಾರದ ಪರವಾಗಿ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಅವರು, ಬೆಂಗಳೂರಿನಲ್ಲಿ ನಿನ್ನೆ ಸಂತಾಪ ಸೂಚಕ ಪತ್ರವನ್ನು ಎಸ್.ಎಂ.ಕೃಷ್ಣ ಅವರ ಪತ್ನಿ ಪ್ರೇಮಾ ಕೃಷ್ಣ ಅವರಿಗೆ ಸಲ್ಲಿಸಿದರು. ಸಚಿವ ಪ್ರಲ್ಹಾದ ಜೋಶಿ ಕೇಂದ್ರ ಸರ್ಕಾರದ ಪ್ರತಿನಿಧಿಯಾಗಿ ಆಗಮಿಸಿ ಎಸ್.ಎಂ.ಕೃಷ್ಣ ಅವರ ಪಾರ್ಥೀವ ಶರೀರದ ಅಂತಿಮ ದರ್ಶನ ಪಡೆದರು.

<><*<><>*><>

ಎಸ್.ಎಂ ಕೃಷ್ಣ ದೂರದೃಷ್ಟಿವುಳ್ಳ ಮುತ್ಸದ್ದಿ ರಾಜಕಾರಣಿ. ಕರ್ನಾಟಕ ಮತ್ತು ದೇಶದ ರಾಜಕಾರಣದಲ್ಲಿ ಅವರು ದೀರ್ಘ ಕಾಲ ತಮ್ಮನ್ನು ತೊಡಗಿಸಿಕೊಂಡಿದ್ದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಬೆಂಗಳೂರಿನ ಸದಾಶಿವನಗರದಲ್ಲಿ ಎಸ್.ಎಂ.ಕೃಷ್ಣ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದು ಕುಟುಂಬದವರಿಗೆ ಸಾಂತ್ವನ ಹೇಳಿದ ನಂತರ ಮಾತನಾಡಿದ ಅವರು ಸುಮಾರು ಆರು ದಶಕಗಳಿಗೂ ಹೆಚ್ಚು ಕಾಲ ಸಾರ್ವಜನಿಕ ಜೀವನದಲ್ಲಿದ್ದ ಅವರು, ಸಮರ್ಥ ಆಡಳಿಗಾರರು. ವಿಧಾನಸಭೆ, ವಿಧಾನ ಪರಿಷತ್ತು, ಲೋಕಸಭೆ ರಾಜ್ಯಸಭೆಗಳಲ್ಲಿ ಸದಸ್ಯರಾಗಿದ್ದ ಕೆಲವೇ ರಾಜಕಾರಣಿಗಳಲ್ಲಿ ಇವರೂ ಒಬ್ಬರು. ಈ ರಾಜ್ಯದ ಮುಖ್ಯಮಂತ್ರಿಯಾಗಿದ್ದರು. ವಿಧಾನಸಭೆಯ ಅಧ್ಯಕ್ಷರೂ ಆಗಿದ್ದರು. ಐದು ವರ್ಷಗಳ ಕಾಲ ರಾಜ್ಯದ ಮುಖ್ಯಮಂತ್ರಿಯಾಗಿ ಬೆಂಗಳೂರನ್ನು ಸಿಂಗಾಪುರ ಮಾಡಬೇಕೆಂಬ ಕನಸು ಕಂಡಿದ್ದರು. ಅವರ ಕನಸು ನನಸಾಗಲಿಲ್ಲ. ನಾಲ್ಕೂವರೆ ವರ್ಷಗಳ ಕಾಲ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಐ. ಟಿ ಬೆಳವಣಿಗೆಗೆ ಅಪಾರ ಕೊಡುಗೆಯನ್ನು ಕೊಟ್ಟಿದ್ದಾರೆ. ಬೆಂಗಳೂರು ನಗರ ಅಂತರರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿ ಕೊಂಡಿದ್ದರೆ ಅದಕ್ಕೆ ಎಸ್.ಎಂ.ಕೃಷ್ಣ ಅವರು ಕಾರಣ. ಬೆಂಗಳೂರು ನಗರ ಭಾರತದ ಸಿಲಿಕಾನ್ ವ್ಯಾಲಿ ಆಗಬೇಕಾದರೆ ಎಸ್.ಎಂ.ಕೃಷ್ಣ ಅವರ ಕೊಡುಗೆ ಅಪಾರವಾಗಿದೆ ಎಂದರು.

<><*<><>*><>

ನೂತನ ಗವರ್ನರ್ ಸಂಜಯ್ ಮಲ್ಹೋತ್ರ ಅವರ ಸಮರ್ಥ ನಾಯಕತ್ವದಲ್ಲಿ ರಿಸರ್ವ್ ಬ್ಯಾಂಕ್ ಮುಂದೆ ಎದುರಾಗುವ ಯಾವುದೇ ಸವಾಲುಗಳನ್ನು ಸಮರ್ಥವಾಗಿ ನಿಭಾಯಿಸಲಿದೆ ಎಂದು ನಿರ್ಗಮಿಸುತ್ತಿರುವ ಆರ್‌ಬಿಐ ಗವರ್ನರ್ ಶಕ್ತಿಕಾಂತ್ ದಾಸ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಮುಂಬೈನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಭಾರತೀಯ ರಿಸರ್ವ್ ಬ್ಯಾಂಕ್ ಹಣದುಬ್ಬರ ನಿಯಂತ್ರಣ ಮರು ಸ್ಥಾಪನೆ, ಬದಲಾಗುತ್ತಿರುವ ಜಾಗತಿಕ ಕ್ರಮಕ್ಕೆ ಹೊಂದಿಕೊಳ್ಳುವುದು, ಸೈಬರ್ ಸುರಕ್ಷತೆಯ ಅಪಾಯಗಳು ಹಾಗೂ ಸಂಬಂಧಿತ ಬೆದರಿಕೆಗಳನ್ನು ಪರಿಹರಿಸುವುದು ಸೇರಿದಂತೆ ಹಲವಾರು ಸವಾಲುಗಳನ್ನು ಎದುರಿಸುತ್ತಿದೆ ಎಂದು ಶಕ್ತಿಕಾಂತ್ ದಾಸ್ ವಿವರಿಸಿದರು.

<><*<><>*><>

ಬೆಂಗಳೂರು ಸೈನಿಕ ಕಲ್ಯಾಣ ಮತ್ತು ಪುನರವಸತಿ ಇಲಾಖೆ ವತಿಯಿಂದ “ವಿಜಯ ದಿವಸ್” ಸಮಾರೋಪ ಸಮಾರಂಭ ಇದೇ ತಿಂಗಳ ೧೬ ರಂದು ಬೆಳಿಗ್ಗೆ ೦೮.೪೫ ಗಂಟೆಗೆ ಬೆಂಗಳೂರಿನ ರಾಷ್ಟ್ರೀಯ ಮಿಲಿಟರಿ ಸ್ಮಾರಕದಲ್ಲಿ ಹಮ್ಮಿಕೊಳ್ಳಲಾಗಿದೆ. ಸಮಾರಂಭದಲ್ಲಿ ಪಾಲ್ಗೊಳ್ಳುವ ಮಾಜಿ ಸೈನಿಕರು ತಮ್ಮ ಮಾಜಿ ಸೈನಿಕರ ಗುರುತಿನ ಚೀಟಿಯೊಂದಿಗೆ ಭಾಗವಹಿಸಬಹುದಾಗಿದೆ ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<><>*><>

ಆಸ್ಟ್ರೇಲಿಯಾದ ಪರ್ಥ್‌ನ ಡಬ್ಲ್ಯು.ಎ.ಸಿ.ಎ ಕ್ರೀಡಾಂಗಣದಲ್ಲಿ ನಡೆಯಲಿರುವ ಮಹಿಳಾ ಏಕದಿನ ಕ್ರಿಕೆಟ್ ಟೂರ್ನಿಯ ಮೂರನೇ ಹಾಗೂ ಅಂತಿಮ ಪಂದ್ಯದಲ್ಲಿ ಭಾರತ ಆಸ್ಟ್ರೇಲಿಯಾ ತಂಡವನ್ನು ಎದುರಿಸಲಿದೆ. ಪಂದ್ಯ ಬೆಳಿಗ್ಗೆ ೯.೩೦ ಕ್ಕೆ ಆರಂಭವಾಗಲಿದೆ. ಸರಣಿಯಲ್ಲಿ ಆಸ್ಟ್ರೇಲಿಯಾ ಈಗಾಗಲೇ ೨-೦ ಅಂತರದ ಮುನ್ನಡೆಗಳಿಸಿದೆ. ಬ್ರಿಸ್ಬೇನ್ ನಲ್ಲಿ ನಡೆದ ಮೊದಲೆರಡು ಪಂದ್ಯಗಳಲ್ಲಿ ಆಸ್ಟ್ರೇಲಿಯಾ ಗೆಲುವು ಸಾಧಿಸಿತ್ತು. ಇದೀಗ ಆತಿಥೇಯರು ಮೂರನೇ ಪಂದ್ಯ ಗೆದ್ದು ಕ್ಲೀನ್ ಸ್ವೀಪ್ ಮಾಡುವ ತವಕದಲ್ಲಿದ್ದಾರೆ.

<><*<><>*><>

ಫಿಡೆ ವಿಶ್ವ ಚೆಸ್ ಚಾಂಪಿಯನ್‌ಶಿಪ್‌ನಲ್ಲಿ, ಭಾರತದ ಗ್ರ್ಯಾಂಡ್‌ಮಾಸ್ಟರ್ ದೊಮ್ಮರಾಜು ಗುಕೇಶ್ ಅವರು ಒಂದು ದಿನದ ವಿಶ್ರಾಂತಿಯ ನಂತರ ಸಿಂಗಾಪುರದಲ್ಲಿ ಇಂದು ೧೩ ನೇ ಪಂದ್ಯದಲ್ಲಿ ಹಾಲಿ ಚಾಂಪಿಯನ್ ಚೀನಾದ ಡಿಂಗ್ ಲಿರೆನ್ ಅವರನ್ನು ಎದುರಿಸಲಿದ್ದಾರೆ. ಪಂದ್ಯ ಮಧ್ಯಾಹ್ನ ೨:೩೦ಕ್ಕೆ ಪ್ರಾರಂಭವಾಗಲಿದೆ. ಗುಕೇಶ್ ಬಿಳಿ ಕಾಯಿಗಳೊಂದಿಗೆ ಆಡಲಿದ್ದಾರೆ. ಇನ್ನು ಕೇವಲ ಎರಡು ಪಂದ್ಯಗಳು ಬಾಕಿ ಉಳಿದಿದ್ದು, ಸಮಬಲದಲ್ಲಿ ತಲಾ ೬ ಅಂಕಗಳನ್ನು ಉಭಯ ಆಟಗಾರರು ಹೊಂದಿದ್ದಾರೆ. ವಿಜೇತರು ಚಾಂಪಿಯನ್ ಪಟ್ಟ ಪಡೆಯಲು ೭.೫ ಅಂಕಗಳ ಅಗತ್ಯವಿದೆ. ಆಟಗಾರರು ೧೪ ಪಂದ್ಯಗಳ ನಂತರ ಟೈ ಆಗಿದ್ದರೆ, ಸ್ಪರ್ಧೆಯು ಡಿಸೆಂಬರ್ ೧೩ ರಂದು ಕ್ಷಿಪ್ರ ಸಮಯದ ಸ್ವರೂಪದೊಂದಿಗೆ ಟೈ-ಬ್ರೇಕರ್‌ಗೆ ಮುಂದುವರಿಯುತ್ತದೆ. ಗಮನಾರ್ಹವಾಗಿ, ಡಿಂಗ್ ಕಳೆದ ವರ್ಷ ಟೈಬ್ರೇಕರ್ ಮೂಲಕ ಚಾಂಪಿಯನ್‌ಶಿಪ್ ಪ್ರಶಸ್ತಿಯನ್ನು ತನ್ನದಾಗಿಸಿಕೊಂಡಿದ್ದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**